**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**ಸಿ.ಸಿ.ನಂ. 269/2023**

| | | |
|---|---|---|
| ಸಾಕ್ಷಿದಾರರ ಹೆಸರು | : | ಜನಾರ್ಧನ |
| ತಂದೆಯ ಹೆಸರು | : | ತಿರುಮಲಾಚಾರಿ |
| ವಯಸ್ಸು | : | 36 ವರ್ಷ |
| ಉದ್ಯೋಗ | : | ವಾಟರ್ ಮ್ಯಾನ್ – ಸವ್ವೆ ಗ್ರಾಮ ಪಂಚಾಯಿತಿ |
| ವಾಸಸ್ಥಳ | : | ಬೆಳಗನಹಳ್ಳಿ ಗ್ರಾಮ, ಹೆಚ್.ಡಿ. ಕೋಟೆ ತಾ. |

**ಸಾಕ್ಷಿಯನ್ನು ದಿನಾಂಕಃ 27.10.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ.ಸ.ಅ. ರವರಿಂದಃ**

ನಾನು 2017 ನೇ ಇಸವಿಯಿಂದ ಇಲ್ಲಿಯವರೆಗೆ ಸವ್ವೆ ಗ್ರಾಮ ಪಂಚಾಯಿತಿಯಲ್ಲಿ ಬೆಳಗನಹಳ್ಳಿ ಗ್ರಾಮದ ವಾಟರ್ ಮ್ಯಾನ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ಚಾಸಾ–1 ನಮ್ಮ ಪಂಚಾಯಿತಿಯ ಪಿ.ಡಿ.ಒ. ಆಗಿದ್ದರು. ಚಾಸಾ–3 ರಿಂದ ಚಾಸಾ–11 ರವರ ಪರಿಚಯವಿರುತ್ತದೆ. ಚಾಸಾ–3 ರವರು ನಮ್ಮ ಪಂಚಾಯಿತಿಯಲ್ಲಿ ವಾಟರ್ ಮ್ಯಾನ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಚಾಸಾ–4 ನಮ್ಮ ಪಂಚಾಯಿತಿಯಲ್ಲಿ ಅಟೆಂಡರ್ ಆಗಿದ್ದರು. ಚಾಸಾ–5 ರಿಂದ ಚಾಸಾ–9 ಮತ್ತು ಚಾಸಾ–11 ಕೊಡಸೀಗೆ ಗ್ರಾಮಸ್ಥರು. ಚಾಸಾ–10 ರವರು ಮಾದಾಪುರ ಗ್ರಾಮದವರು.

ದಿನಾಂಕಃ 19.12.2022 ರಂದು ಚಾಸಾ–1 ರವರು ನನ್ನನ್ನು ಹಾಗು ಚಾಸಾ–3 ಮತ್ತು ಚಾಸಾ–4 ರವರನ್ನು ಅಳತೆಯ ಸಂಬಂಧ ಬೆಳಿಗ್ಗೆ ಸುಮಾರು 11.00 ಗಂಟೆ

ಸಮಯದಲ್ಲಿ ಕೊಡಸೀಗೆ ಗ್ರಾಮಕ್ಕೆ ಕರೆದುಕೊಂಡು ಹೋಗಿ ಅಳತೆ ಕಾರ್ಯ ಮಾಡಿಸುತ್ತಿರುವಾಗ ಆರೋಪಿಗಳು ಗುಂಪು ಕಟ್ಟಿಕೊಂಡು ಬಂದು ಗಲಾಟೆ ಮಾಡಿ ಬೋಳೀಮಕ್ಕಳೇ, ಸೂಳೇಮಕ್ಕಳೇ ಎಂದು ಅವಾಚ್ಯ ಶಬ್ದಗಳಿಂದ ಬೈದು ಅಳತೆ ಮಾಡಲು ಬಿಟ್ಟಿರುವುದಿಲ್ಲ. ನಂತರ ನಾವು ಕೆಲಸನ್ನು ನಿಲ್ಲಿಸಿ ಕಛೇರಿಗೆ ಬಂದಿರುತ್ತೇವೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿತರನ್ನು ನೋಡಿ ಗುರುತಿಸುತ್ತಾರೆ.

***(ಈ ಹಂತದಲ್ಲಿ ಸ.ಸ.ಅ. ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಕೋರಿಕೊಂಡಿದ್ದು, ಕೋರಿಕೆಯನ್ನು ಮನ್ನಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)***

**ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಆರೋಪಿಗಳು ಮೇಲೆ ಹೇಳಿದಂತೆ ಗಲಾಟೆ ಮಾಡಿ, ಅವಾಚ್ಯ ಶಬ್ದಗಳಿಂದ ಬೈದು, ಅಳತೆ ಮಾಡಲು ಬಂದರೆ ನಿಮ್ಮನ್ನು ಕತ್ತರಿಸಿ ಹಾಕುತ್ತೇವೆಂದು ಕೊಲೆ ಬೆದರಿಕೆ ಹಾಕಿರುತ್ತಾರೆಂದರೆ ಸರಿ. ಈ ಎಲ್ಲಾ ಸಂಗತಿಗಳ ಬಗ್ಗೆ ನಾನು ದಿನಾಂಕಃ 21.12.2022 ರಂದು ತನಿಖಾಧಿಕಾರಿಗಳ ಮುಂದೆ ಹೇಳಿಕೆ ನೀಡಿರುತ್ತೇನೆಂದರೆ ಸರಿ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಗೈರು ಹಾಜರಾಗಿದ್ದು ಆರೋಪಿತರು ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿದ್ದು, ಸಮಯಾವಕಾಶ ನೀಡಿ ಮುಂದೂಡಲಾಯಿತು.**

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**